**ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ನ್ಯಾಯಾಲಯ, ಗುಂಡ್ಲುಪೇಟೆ**

**ಸಿ.ಸಿ ಸಂಖ್ಯೆ: 734/2017**

| | | |
|---|---|---|
| ಹೆಸರು | ಶ್ರೀ ನಾಗರಾಜು | ಚಾಸಾಃ 05 |
| ತಂದೆ ಹೆಸರು | ಶ್ರೀ ಚಿನ್ನಯ್ಯ | ಫ್ರಾಸಾಃ 08 |
| ವಯಸ್ಸು | 46 ವರ್ಷ | ಸಾಕ್ಷಿಯನ್ನು ದಿನಾಂಕಃ 05.05.2026 ರಂದು ಪ್ರಮಾಣೀಕರಿಸಲಾಯಿತು. |
| ಉದ್ಯೋಗ | ಖಾಸಗಿ ಉದ್ಯೋಗಿ | |
| ವಾಸ | ನಿಟ್ರೆ ಗ್ರಾಮ | |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ–**

ಈ ಪ್ರಕರಣದ ಬಗ್ಗೆ ನನಗೆ ಏನೂ ಗೊತ್ತಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ಈ ಪ್ರಕರಣದ ಆರೋಪಿಗಳು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪೂರ್ಣ ಪ್ರಮಾಣದಲ್ಲಿ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಎಪಿಪಿರವರು ಅನುಮತಿ ಕೋರಿರುತ್ತಾರೆ. ದಾಖಲೆಗಳನ್ನು ಪರಿಶೀಲಿಸಿ ಅನುಮತಿಸಿದೆ.)

**ಪಾಟೀ ಸವಾಲು: ಮಾನ್ಯ ಎಪಿಪಿ ಯವರಿಂದಃ**

ದಿಃ 03.04.2017 ರಂದು ಮಧ್ಯಾಹ್ನ 2.30 ರ ಸಮಯದಲ್ಲಿ ನಾನು ಮನೆಯಲ್ಲಿ ಇದ್ದಾಗ ಮೂರು ಜನ ವ್ಯಕ್ತಿಗಳು ಕಾರಿನಲ್ಲಿ ಬಂದರು ಎಂದರೆ ಸರಿಯಲ್ಲ. ಗುಂಡ್ಲುಪೇಟೆ ಉಪಚುನಾವಣೆಯ ಸಂಬಂಧ ನಮ್ಮ ಬಳಿ ಆಧಾರ್ ಕಾರ್ಡ್ ಮತ್ತು ಚುನಾವಣೆ ಗುರುತಿನ ಚೀಟಿಯನ್ನು ಸಂಗ್ರಹಿಸಲು ಬಂದಿದ್ದೇವೆ ಕಾಂಗ್ರೇಸ್ ಪಕ್ಷಕ್ಕೆ ಮತ ಹಾಕಬೇಕು, ಇಲ್ಲದಿದ್ದರೆ ಸದರಿ ಕಾರ್ಡ್ ಗಳನ್ನು ರದ್ದುಗೊಳಿಸುವುದಾಗಿ ಹೇಳಿದರು ಎಂದರೆ ಸರಿಯಲ್ಲ. ನಾನು, ಚಾಸಾ–6 ರವರನ್ನು ಮನೆಗೆ ಕರೆಸಿಕೊಂಡು ನಮ್ಮ ಮನೆಗೆ ಬಂದಿದ್ದ ವ್ಯಕ್ತಿಗಳ ಹೆಸರನ್ನು ಕೇಳಲಾಗಿ ಹೆಚ್.ಡಿ. ಪ್ರಸನ್ನಕುಮಾರ್, ರಕ್ಷಿತ್ ಎಂ. ಬಿನ್ ಮಂಜುನಾಥ ಮತ್ತು ಹರೀಶ್ ಒಲೆಕಾರ್ ಬಿನ್ ಆಶೋಕಪ್ಪ

ಒಲೇಕಾರ್ ಎಂದು ನನಗೆ ತಿಳಿಸಿದರು ಎಂದರೆ ಸರಿಯಲ್ಲ. ನಮ್ಮ ಮನೆಯ ಬಳಿ ಆರೋಪಿಗಳು ತಂದಿದ್ದ ಕಾರ್ ಸಂಖ್ಯೆ ಕೆಎ–51–ಎಂಸಿ–9 ಆಗಿತ್ತು ಎಂದರೆ ಸರಿಯಲ್ಲ. ಸದರಿ ವಿಷಯವನ್ನು ನಾನು ಸೆಕ್ಟರ್ ಅಧಿಕಾರಿ ಚಾಸಾ–2 ರವರಿಗೆ ಕರೆ ಮಾಡಿ ತಿಳಿಸಿದೆ ಎಂದರೆ ಸರಿಯಲ್ಲ. ನಾನು ಮತ್ತು ಚಾಸಾ–6 ರವರು ಆರೋಪಿಗಳನ್ನು ಕಾರ್ ಸಹಿತ ಠಾಣೆಗೆ ಕರೆದುಕೊಂಡು ಹೋದೇವು ಎಂದರೆ ಸರಿಯಲ್ಲ. ಚಾಸಾ–1 ಮತ್ತು 2 ರವರು ಬೇಗೂರು ಠಾಣೆಗೆ ಬಂದಾಗ ನಾನು ಮತ್ತು ಚಾಸಾ–6 ರವರು ಸದರಿ ವಿಷಯವನ್ನು ಚಾಸಾ–1 ಮತ್ತು 2 ರವರಿಗೆ ತಿಳಿಸಿದೇವು ಎಂದರೆ ಸರಿಯಲ್ಲ.

ಚಾಸಾ–1 ರವರು ಠಾಣೆಗೆ ಪಂಚರನ್ನು ಬರಮಾಡಿಕೊಂಡು ಆರೋಪಿಗಳು ತಂದಿದ್ದ ಸದರಿ ಕಾರ್ ನ್ನು ಚುನಾವಣೆ ನೀತಿ ಸಂಹಿತೆಯನ್ನು ಉಲ್ಲಂಘಿಸಿದ್ದರಿದ್ದ ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ಆರೋಪಿಗಳ ವಿರುದ್ಧ ದಿಃ 04.04.2017 ರಂದು ಚಾಸಾ–1 ರವರು ದೂರು ನೀಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ವಿಷಯವಾಗಿ ದಿಃ 04.04.2017 ರಂದು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ9 ಎಂದು ಗುರುತಿಸಲಾಯಿತು. ನಿಪಿ9 ರ ವಿಷಯ ಗೊತ್ತಿದ್ದರು ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರಿಂದ ಇರುವುದಿಲ್ಲ:**

(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಗೆ ಉಕ್ತ ಲೇಖನ ಕೊಟ್ಟು ಓದಿ ನೋಡಿ ಸರಿಪಡಿಸಿ ನಂತರ ಸಹಿ ಮಾಡಲಾಯಿತು)

**ಓ ಹೇ ಕೇ ಸ ಇ ಎ ಒ**

**(ಗಿರೀಶ ಆರ್.ಬಿ)**
**ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ**
**ಗುಂಡ್ಲುಪೇಟೆ**